**National**
**Kannada**
**26.11.2025 07.35 a.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಇಂದು ಸಂವಿಧಾನ ದಿನ: ನವದೆಹಲಿಯ ಸೆಂಟ್ರಲ್ ಹಾಲ್‌ನಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ, ಪ್ರಧಾನಿ ಭಾಗಿ

೨. ಯುರೇಷಿಯನ್ ಆರ್ಥಿಕ ಒಕ್ಕೂಟದೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಕ್ಕಾಗಿ ಇಂದಿನಿಂದ ಭಾರತ ಔಪಚಾರಿಕ ಮಾತುಕತೆ

೩. ಅರುಣಾಚಲ ಪ್ರದೇಶ, ದೇಶದ ಅವಿಭಾಜ್ಯ ಅಂಗ: ಭಾರತ ಪುನರುಚ್ಚಾರ

೪. ೨೦೨೬ ರ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ವೇಳಾಪಟ್ಟಿ ಪ್ರಕಟಿಸಿದ ಐಸಿಸಿ

**<>><><*><><<>**

ನವದೆಹಲಿಯ ಸಂವಿಧಾನ ಸದನ ಸೆಂಟ್ರಲ್ ಹಾಲ್‌ನಲ್ಲಿ ಇಂದು ನಡೆಯುವ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ, ಉಭಯ ಸದನಗಳ ಸಂಸತ್ ಸದಸ್ಯರು ಸಹ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ರಾಷ್ಟ್ರಪತಿ ಮುರ್ಮು ಸಂವಿಧಾನದ ಪೀಠಿಕೆಯ ವಾಚನದ ನೇತೃತ್ವ ವಹಿಸಲಿದ್ದಾರೆ. ಇದಲ್ಲದೆ, ಮಲಯಾಳಂ, ಮರಾಠಿ, ನೇಪಾಳಿ, ಪಂಜಾಬಿ, ಬೋಡೋ, ಕಾಶ್ಮೀರಿ, ತೆಲುಗು, ಒಡಿಯಾ ಮತ್ತು ಅಸ್ಸಾಮಿ ಸೇರಿದಂತೆ ಒಂಬತ್ತು ಭಾಷೆಗಳಲ್ಲಿ ಸಂವಿಧಾನದ ಅನುವಾದಿತ ಆವೃತ್ತಿಯನ್ನು ಬಿಡುಗಡೆ ಮಾಡಲಾಗುವುದು. ಈ ಸಂದರ್ಭದಲ್ಲಿ ಸ್ಮರಣಾರ್ಥ ಕಿರುಪುಸ್ತಕವನ್ನು ಸಹ ಬಿಡುಗಡೆ ಮಾಡಲಾಗುವುದು. ಈ ವರ್ಷ ಸಂವಿಧಾನ ಅಂಗೀಕಾರದ ೭೬ ನೇ ವರ್ಷಾಚರಣೆಯಾಗಿದೆ.

**<>><><*><><<>**

ಹೈದರಾಬಾದ್‌ನ ಜಿಎಂಆರ್ ಏರೋಸ್ಪೇಸ್ ಮತ್ತು ಇಂಡಸ್ಟ್ರಿಯಲ್ ಪಾರ್ಕ್‌ನಲ್ಲಿ ಸಫ್ರಾನ್ ಏರ್‌ಕ್ರಾಫ್ಟ್ ಎಂಜಿನ್ ಸರ್ವೀಸಸ್ ಇಂಡಿಯಾದ ಘಟಕವನ್ನು ಪ್ರಧಾನಿ ನರೇಂದ್ರ ಮೋದಿ ಇಂದು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಉದ್ಘಾಟಿಸಲಿದ್ದಾರೆ. ಎಸ್‌ಎಇಎಸ್‌ಐ ಎಂಬುದು ಸಫ್ರಾನ್‌ನ ಪ್ರಮುಖ ವಾಯುಯಾನ ಪ್ರೊಪಲ್ಷನ್ ಎಂಜಿನ್‌ಗಳಿಗಾಗಿ ಮೀಸಲಾದ ನಿರ್ವಹಣೆ, ದುರಸ್ತಿ ಮತ್ತು ಕೂಲಂಕುಷ ಪರೀಕ್ಷೆ ಸೌಲಭ್ಯವಾಗಿದೆ ಎಂದು ಪ್ರಧಾನ ಮಂತ್ರಿ ಕಚೇರಿ ತಿಳಿಸಿದೆ. ಈ

ಸೌಲಭ್ಯದೊಂದಿಗೆ, ಮೊದಲ ಬಾರಿಗೆ, ಜಾಗತಿಕ ಎಂಜಿನ್ ಮೂಲ ಉಪಕರಣ ತಯಾರಕ ಕಂಪನಿಯು, ಭಾರತದಲ್ಲಿ ಎಂಆರ್‌ಒ ಕಾರ್ಯಾಚರಣೆಯನ್ನು ಸ್ಥಾಪಿಸಿದೆ. ವಾಯುಯಾನ ವಲಯದಲ್ಲಿ ಸ್ವಾವಲಂಬನೆಯ ಗುರಿಯತ್ತ ಎಂಆರ್‌ಒ ಸೌಲಭ್ಯವು ಒಂದು ಪ್ರಮುಖ ಹೆಜ್ಜೆಯಾಗಿದೆ.

<><><*><><<>

ರಷ್ಯಾ ನೇತೃತ್ವದ ಯುರೇಷಿಯನ್ ಆರ್ಥಿಕ ಒಕ್ಕೂಟದೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಕ್ಕಾಗಿ ಭಾರತ ಇಂದು ಔಪಚಾರಿಕ ಮಾತುಕತೆಗಳನ್ನು ಪ್ರಾರಂಭಿಸಲಿದೆ. ೨೦೨೫ ರ ಆಗಸ್ಟ್ ೨೦ ರಂದು ನಿಯಮಗಳಿಗೆ ಸಹಿ ಹಾಕಿದ ನಂತರ, ರಷ್ಯಾ, ಅರ್ಮೇನಿಯಾ, ಬೆಲಾರಸ್, ಕಝಾಕಿಸ್ತಾನ್ ಮತ್ತು ಕಿರ್ಗಿಸ್ತಾನ್ ಸೇರಿದಂತೆ ಐದು ಸದಸ್ಯರ ಇಎಇಯು ಜೊತೆಗಿನ ಎಫ್‌ಟಿಎ ಚರ್ಚೆಗಳು ನವದೆಹಲಿಯಲ್ಲಿ ಪ್ರಾರಂಭವಾಗಲಿವೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ.ಉಲ್ಲೇಖಿತ ನಿಯಮಗಳು ಭಾರತೀಯ ವ್ಯವಹಾರಗಳಿಗೆ, ವಿಶೇಷವಾಗಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು, ರೈತರು ಹಾಗೂ ಮೀನುಗಾರರಿಗೆ ಹೊಸ ಮಾರುಕಟ್ಟೆಗಳನ್ನು ತೆರೆಯುವತ್ತ ೧೮ ತಿಂಗಳ ಮಾರ್ಗಸೂಚಿಯನ್ನು  ರೂಪಿಸುತ್ತವೆ. ಅಮೆರಿಕ ವಿಧಿಸಿದ ಹೆಚ್ಚಿನ ಸುಂಕಗಳ ನಡುವೆ ಭಾರತ ತನ್ನ ರಫ್ತು ತಾಣಗಳನ್ನು ವೈವಿಧ್ಯಗೊಳಿಸಲು ಪ್ರಯತ್ನಿಸುತ್ತಿರುವುದರಿಂದ ಈ ಉಪಕ್ರಮವು ಮಹತ್ವವನ್ನು ಪಡೆಯುತ್ತದೆ.  ಇಎಇಯು ಮಾತುಕತೆಗಳ ಹೊರತಾಗಿ, ಭಾರತವು ಹಲವಾರು ಇತರೆ ವ್ಯಾಪಾರ ಪಾಲುದಾರಿಕೆಗಳನ್ನು ಅನುಸರಿಸುತ್ತಿದೆ ಎಂದು ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ದಕ್ಷಿಣ ಆಫ್ರಿಕಾ, ನಮೀಬಿಯಾ, ಬೋಟ್ಸ್ವಾನಾ, ಲೆಸೊಥೊ ಮತ್ತು ಎಸ್ವಾಟಿನಿ ಸೇರಿದಂತೆ ದಕ್ಷಿಣ ಆಫ್ರಿಕಾದ ಕಸ್ಟಮ್ಸ್ ಒಕ್ಕೂಟದೊಂದಿಗೆ ವ್ಯಾಪಾರ ಒಪ್ಪಂದದ ಸಾಧ್ಯತೆಯನ್ನು ಸರ್ಕಾರ ಅನ್ವೇಷಿಸುತ್ತಿದೆ. ಎಸ್‌ಎಸಿಯು ಒಂದು ಶತಮಾನಕ್ಕೂ ಹೆಚ್ಚು ಕಾಲದ ವಿಶ್ವದ ಅತ್ಯಂತ ಹಳೆಯ ಕಸ್ಟಮ್ಸ್ ಒಕ್ಕೂಟವಾಗಿದೆ ಎಂದು ಅವರು ಹೇಳಿದರು. ಬ್ರೆಜಿಲ್, ಅರ್ಜೆಂಟೀನಾ, ಉರುಗ್ವೆ ಮತ್ತು ಪರಾಗ್ವೆಗಳನ್ನು ಒಳಗೊಂಡಿರುವ ಲ್ಯಾಟಿನ್ ಅಮೇರಿಕನ್ ವ್ಯಾಪಾರ ಒಕ್ಕೂಟವಾದ ಮೆರ್ಕೋಸೂರ್ ಜೊತೆ ಎರಡನೇ ಹಂತದ ಆದ್ಯತೆಯ ವ್ಯಾಪಾರ ಒಪ್ಪಂದಕ್ಕಾಗಿ ಭಾರತ ಮಾತುಕತೆಯಲ್ಲಿ ತೊಡಗಿದೆ.

<><><*><><<>

ಅರುಣಾಚಲ ಪ್ರದೇಶವು ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗವಾಗಿದೆ ಹಾಗೂ ಚೀನಾದ ಕಡೆಯಿಂದ ಎಷ್ಟೇ ನಿರಾಕರಣೆ ಬಂದರೂ ಈ ನಿರ್ವಿವಾದದ ವಾಸ್ತವವನ್ನು ಬದಲಾಯಿಸಲು ಸಾಧ್ಯವಿಲ್ಲ ಎಂದು ಕೇಂದ್ರ ಸರ್ಕಾರ ಪುನರುಚ್ಚರಿಸಿದೆ. ಚೀನಾದ ವಿದೇಶಾಂಗ ಸಚಿವಾಲಯದ ಹೇಳಿಕೆಗಳ ಕುರಿತು ಸುದ್ದಿಗಾರರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಅರುಣಾಚಲ ಪ್ರದೇಶದ ಭಾರತೀಯ ಪ್ರಜೆಯ ಬಂಧನದ ವಿಷಯವನ್ನು ಭಾರತ ಬಲವಾಗಿ ಖಂಡಿಸಿದೆ ಎಂದು ಹೇಳಿದರು.  ಭಾರತೀಯ ಪ್ರಜೆ ಮಾನ್ಯ ಪಾಸ್‌ಪೋರ್ಟ್ ಹೊಂದಿದ್ದು, ಜಪಾನ್‌ಗೆ ತನ್ನ ಮುಂದಿನ ಪ್ರಯಾಣದಲ್ಲಿ ಶಾಂಘೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೂಲಕ ಸಾಗುತ್ತಿದ್ದರು. ಅಂತಾರಾಷ್ಟ್ರೀಯ ವಿಮಾನ ಪ್ರಯಾಣವನ್ನು ನಿಯಂತ್ರಿಸುವ ತಮ್ಮ ಕ್ರಮಗಳನ್ನು ಚೀನಾದ ಅಧಿಕಾರಿಗಳು ಇನ್ನೂ ವಿವರಿಸಲು ಸಾಧ್ಯವಾಗಿಲ್ಲ ಎಂದರು.  ಚೀನಾ ಅಧಿಕಾರಿಗಳ ಕ್ರಮ, ಎಲ್ಲಾ ದೇಶಗಳ ಪ್ರಜೆಗಳಿಗೆ ೨೪ ಗಂಟೆಗಳವರೆಗೆ ವೀಸಾ ಮುಕ್ತ ಸಾರಿಗೆಯನ್ನು ಅನುಮತಿಸುವ ತಮ್ಮದೇ ಆದ ನಿಯಮಗಳನ್ನು ಉಲ್ಲಂಘಿಸುತ್ತವೆ ಎಂದು ರಣಧೀರ್ ಜೈಸ್ವಾಲ್ ತಿಳಿಸಿದರು.

<>><><*><><<>

ನಾಗರಿಕ ವಿಮಾನಯಾನ ಸಚಿವ ಕೆ.ರಾಮಮೋಹನ್ ನಾಯ್ಡು ಅವರು ನಿನ್ನೆ ನವದೆಹಲಿಯಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರನ್ನು ಭೇಟಿ ಮಾಡಿದರು. ಸಭೆಯಲ್ಲಿ, ನಾಗರಿಕ ವಿಮಾನಯಾನ ಸಚಿವಾಲಯವು ಸಮಕಾಲೀನ ಅಗತ್ಯತೆಗಳು ಮತ್ತು ಜಾಗತಿಕ ಮಾನದಂಡಗಳಿಗೆ ಅನುಗುಣವಾಗಿ ನಾಗರಿಕ ವಿಮಾನಯಾನ ವಲಯವನ್ನು ಬಲಪಡಿಸಲು ಕೈಗೊಂಡಿರುವ ವಿವಿಧ ಕ್ರಮಗಳು ಹಾಗೂ ಉಪಕ್ರಮಗಳ ಬಗ್ಗೆ ಉಪರಾಷ್ಟ್ರಪತಿಗಳಿಗೆ ವಿವರಿಸಲಾಯಿತು. ಕೈಗೆಟುಕುವ ವಿಮಾನ ಪ್ರಯಾಣ, ಗಮನಾರ್ಹ ಮೂಲಸೌಕರ್ಯ ಅಭಿವೃದ್ಧಿ ಮತ್ತು ನಾಗರಿಕ ವಿಮಾನಯಾನದಲ್ಲಿ ಆತ್ಮನಿರ್ಭರತೆಯನ್ನು ಉತ್ತೇಜಿಸುವ ಉಪಕ್ರಮಗಳ ಬಗ್ಗೆಯೂ ಉಪರಾಷ್ಟ್ರಪತಿ ರಾಧಾಕೃಷ್ಣನ್ ಅವರಿಗೆ ಮಾಹಿತಿ ನೀಡಲಾಯಿತು.

<>><><*><><<>

ಕೇಂದ್ರ ಸರ್ಕಾರ ಘೋಷಿಸಿರುವ ನಾಲ್ಕು ಕಾರ್ಮಿಕ ಸಂಹಿತೆಗಳು, ಕಾರ್ಮಿಕರ ಸಾಮಾಜಿಕ ಸೇರ್ಪಡೆ ಮತ್ತು ಕಾರ್ಯಪಡೆಯಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಮೂಲಕ ಉದ್ಯೋಗವನ್ನು ಔಪಚಾರಿಕಗೊಳಿಸುವತ್ತ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದು ಭಾರತೀಯ ರಫ್ತು ಸಂಸ್ಥೆಗಳ ಒಕ್ಕೂಟದ ಮಹಾನಿರ್ದೇಶಕ ಡಾ. ಅಜಯ್ ಸಹಾಯ್ ಅಭಿಪ್ರಾಯಪಟ್ಟಿದ್ದಾರೆ. ಇದು ಎಲ್ಲರನ್ನೂ ಒಳಗೊಂಡ ಸಮಾಜಕ್ಕೂ ಕಾರಣವಾಗುತ್ತದೆ. ಕೆಲಸದ ಸ್ಥಳದಲ್ಲಿ ರಾತ್ರಿ ಪಾಳಿಯಲ್ಲಿ ಮಹಿಳೆಯರಿಗೆ ಸುರಕ್ಷತೆ ಮತ್ತು ಭದ್ರತೆಯನ್ನು ಒದಗಿಸಲು ಕಾರ್ಮಿಕ ಸಂಹಿತೆಗಳ

ಅಡಿಯಲ್ಲಿ ಹಲವಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ, ಈ ಕಾರ್ಮಿಕ ಸಂಹಿತೆಗಳು, ಕಾರ್ಮಿಕ ಸಮಸ್ಯೆಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಪರಿಹರಿಸುವುದರಿಂದ ದೇಶವು ಉತ್ಪಾದನೆಯಲ್ಲಿ ಹೆಚ್ಚಿನ ಬೆಳವಣಿಗೆಯನ್ನು ಕಾಣಲಿದೆ. ಈ ಹಂತವು ಕೈಗಾರಿಕೆಗಳನ್ನು ಮತ್ತಷ್ಟು ಹೂಡಿಕೆ ಮತ್ತು ವ್ಯಾಪಾರ ಅವಕಾಶಗಳ ವಿಸ್ತರಣೆಗೆ ಪ್ರೋತ್ಸಾಹಿಸುತ್ತದೆ ಎಂದು ಡಾ. ಅಜಯ್ ಸಹಾಯ್ ವಿಶ್ವಾಸ ವ್ಯಕ್ತಪಡಿಸಿದರು.

<>><><*><><<>

ಇಂದಿನ ಭಾರತದ ಅಗತ್ಯಗಳಿಗೆ ವ್ಯವಸ್ಥೆಗಳು ಸ್ಪಂದಿಸುವಂತೆ ನೋಡಿಕೊಳ್ಳಲು ಕೇಂದ್ರ ಕಾರ್ಪೊರೇಟ್ ವ್ಯವಹಾರಗಳ ಸಚಿವಾಲಯ, ತನ್ನ ಕಾಯಿದೆಗಳು ಮತ್ತು ನಿಯಮಗಳಲ್ಲಿ ಪದೇ ಪದೆ ತಿದ್ದುಪಡಿಗಳನ್ನು ತಂದಿದೆ ಎಂದು ಕೇಂದ್ರ ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

<>><><*><><<>

ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ-ಐಸಿಸಿ ೨೦೨೬ ರ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಈ ಪಂದ್ಯಾವಳಿ ಫೆಬ್ರವರಿ ೭ ರಂದು ಆರಂಭವಾಗಲಿದ್ದು, ಭಾರತ ಮತ್ತು ಶ್ರೀಲಂಕಾ ಜಂಟಿಯಾಗಿ ಆತಿಥ್ಯ ವಹಿಸಲಿವೆ. ಭಾರತ ಮತ್ತು ಪಾಕಿಸ್ತಾನ ನಡುವಿನ ಕ್ರಿಕೆಟ್ ಪಂದ್ಯ ಫೆಬ್ರವರಿ ೧೫ ರಂದು ಕೊಲಂಬೊದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆಯಲಿದೆ. ಪಾಕಿಸ್ತಾನ ತನ್ನ ಎಲ್ಲಾ ಪಂದ್ಯಗಳನ್ನು ಶ್ರೀಲಂಕಾದಲ್ಲಿ ಆಡಲಿದೆ. ಟಿ-೨೦ ವಿಶ್ವಕಪ್ ವಿಜೇತ ನಾಯಕ ರೋಹಿತ್ ಶರ್ಮಾ ಅವರನ್ನು ೨೦೨೬ ರ ಟಿ-೨೦ ವಿಶ್ವಕಪ್‌ನ ಬ್ರ್ಯಾಂಡ್ ರಾಯಭಾರಿಯಾಗಿ ನೇಮಿಸಲಾಗಿದೆ. ಭಾರತ ಮತ್ತು ಶ್ರೀಲಂಕಾ, ಎರಡನೇ ಬಾರಿಗೆ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಅನ್ನು ಆಯೋಜಿಸುತ್ತಿವೆ. ಟಿ-೨೦ ವಿಶ್ವಕಪ್‌ನಲ್ಲಿ ಇಪ್ಪತ್ತು ತಂಡಗಳು ಸ್ಪರ್ಧಿಸಲಿದ್ದು, ತಂಡಗಳನ್ನು ತಲಾ ಐದು ತಂಡಗಳ ನಾಲ್ಕು ಗುಂಪುಗಳಾಗಿ ವಿಂಗಡಿಸಲಾಗಿದೆ. ಭಾರತವು, ಸಾಂಪ್ರದಾಯಿಕ ಎದುರಾಳಿಗಳಾದ ಪಾಕಿಸ್ತಾನ, ನೆದರ್ಲ್ಯಾಂಡ್ಸ್, ನಮೀಬಿಯಾ ಮತ್ತು ಅಮೆರಿಕ ಜೊತೆಗೆ ಎ ಗುಂಪಿನಲ್ಲಿ ಸ್ಥಾನ ಪಡೆದಿವೆ.

<>><><*><><<>

ಗುವಾಹಟಿಯ ಬರ್ಸಪಾರಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಎರಡನೇ ಮತ್ತು ಅಂತಿಮ ಟೆಸ್ಟ್ ಕ್ರಿಕೆಟ್ ಪಂದ್ಯದ ೪ ನೇ ದಿನದಾಟದ ಅಂತ್ಯಕ್ಕೆ ದಕ್ಷಿಣ ಆಫ್ರಿಕಾ ನೀಡಿದ್ದ ೫೪೯ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಭಾರತ, ಎರಡನೇ ಇನ್ನಿಂಗ್ಸ್‌ನಲ್ಲಿ ೨ ವಿಕೆಟ್‌ಗಳ ನಷ್ಟಕ್ಕೆ ೨೭ ರನ್ ಗಳಿಸಿದೆ. ಇಂದು ಐದನೇ ಮತ್ತು ಅಂತಿಮ ದಿನದಾಟ ಮುಂದುವರಿಯಲಿದೆ. ಸಾಯಿ ಸುದರ್ಶನ್ ೨ ಮತ್ತು ಕುಲದೀಪ್ ಯಾದವ್ ೪ ರನ್ ಗಳೊಂದಿಗೆ ಕಣದಲ್ಲಿದ್ದಾರೆ.

**<>><><*><><<>**

**ಗುಜರಾತ್‌ನ ಅಹಮದಾಬಾದ್‌ನಲ್ಲಿರುವ ಇಕೆಎ ಅರೆನಾದಲ್ಲಿ ಇಂದು ನಡೆಯಲಿರುವ ಎಎಫ್‌ಸಿ ೧೭ ವರ್ಷದೊಳಗಿನ ಏಷ್ಯನ್ ಕಪ್ ಫುಟ್‌ಬಾಲ್ ೨೦೨೬ ಅರ್ಹತಾ ಗುಂಪಿನ ಡಿ ಪಂದ್ಯದಲ್ಲಿ ಭಾರತ ತಂಡ, ಚೈನೀಸ್ ತೈಪೆ ವಿರುದ್ಧ ಸೆಣಸಲಿದೆ. ಪಂದ್ಯ ಸಂಜೆ ೭:೩೦ ಕ್ಕೆ ಪ್ರಾರಂಭವಾಗಲಿದೆ. ಗುಜರಾತ್ ರಾಜ್ಯ ಫುಟ್‌ಬಾಲ್ ಅಸೋಸಿಯೇಷನ್, ಕ್ರೀಡಾಂಗಣಕ್ಕೆ ಉಚಿತ ಪ್ರವೇಶವನ್ನು ಘೋಷಿಸಿದೆ.**

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**